4. ವರದಿಗಳನ್ನೊಪ್ಪಿಸುವುದು

ಶ್ರೀ ಡೆರಿಕ್ ಎಂ. ಫುಲಿನ್ ಫಾ (ನಾಮನಿರ್ದೇಶಿತ): ಮಾನ್ಯ ಅಧ್ಯಕ್ಷರೆ, 2010–11ನೇ ಸಾಲಿನ ಹಕ್ಕುಬಾಧ್ಯತಾ ಸಮಿತಿಯ ನಾಲ್ಕನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಉಪಾಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು

5. ಶಾಸನ ರಚನೆ

ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಮುಗಳ ರದ್ದತಿ (ಕರ್ನಾಟಕ ತಿದ್ದುಪಡಿ) ವಿಧೇಯಕ, 2011.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್. ಸುರೇಶ್ ಕುಮಾರ್: (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) (ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, 2011ನೇ ಸಾಲಿನ ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಮುಗಳ ರದ್ಧತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಮುಗಳ ರದ್ದತಿ (ಕರ್ನಾಟಕ ತಿದ್ದಯಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ

ಉಪಾಧ್ಯಕ್ಷರು: ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು

ಶ್ರೀ ಎಸ್. ಸುರೇಶ್ ಕುಮಾರ್: (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) (ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, 2011ನೇ ಸಾಲಿನ ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಮುಗಳ ರದ್ಧತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

2011ನೇ ಸಾಲಿನ ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಮುಗಳ ರದ್ದತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಉಪಾಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ (ಅನುಬಂಧ–2)

6. ಖಾಸಗಿ ಸದಸ್ಯರ ನಿರ್ಣಯ

ಶ್ರೀ ಅಭಯ ಪಾಟೀಲ್ (ಬೆಳಗಾಂ ಗ್ರಾಮಾಂತರ): ಮಾನ್ಯ ಉಪಾಧ್ಯಕ್ಷರೆ, ನಾನು ಈ ಕೆಳಕಂಡ ನಿರ್ಣಯವನ್ನು ತಮ್ಮ ಅನುಮತಿ ಕೋರಿ ಸಭೆಯ ಮುಂದೆ ಮಂಡಿಸುತ್ತೇನೆ. "ಸನ್ 1024ರಲ್ಲಿ ಬೆಳಗಾವಿಯಲ್ಲಿ ನಡೆದ 39ನೇ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದಲ್ಲಿ ರಾಷ್ಟ್ರಪಿತ ಮಹಾತ್ಮಾಗಾಂಧೀಜಿಯವರು ಅಧ್ಯಕ್ಷತೆಯನ್ನು ವಹಿಸಿಕೊಂಡಿರುವ ಸವಿನೆನಪಿಗಾಗಿ ಬೆಳಗಾವಿಯ ಸಂಪೂರ್ಣ ಅಭಿವೃದ್ಧಿಗಾಗಿ ಸುಮಾರು 5357–00 ಕೋಟಿ ರೂಪಾಯಿಗಳ ಯೋಜನೆಗೆ ರಾಜ್ಯ ಸರ್ಕಾರವು ಯೋಜನೆಯ ಅಂದಾಜು ಮೊತ್ತದ ಪ್ರತಿಶತ 10 ರಷ್ಟು ಅನುದಾನವನ್ನು ಭರಿಸಲು ಒಪ್ಪಿಕೊಂಡಿದ್ದು, ಉಳಿದ ಪ್ರತಿಶತ 90 ರಷ್ಟು ಅನುದಾನವನ್ನು ಕೇಂದ್ರ ಸರ್ಕಾರವು ಭರಿಸುವ ಬಗ್ಗೆ ಸಿದ್ಧಪಡಿಸಿರುವ ಪ್ರಸ್ತಾವನೆಯನ್ನು ಕಾರ್ಯಗತಗೊಳಿಸಲು ಈ ಸದನವು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತದೆ: ಎಂಬ ನಿರ್ಣಯವನ್ನು ಮಂಡಿಸಲಿಚ್ಚಿಸುತ್ತೇನೆ.